## ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿರವರ ನ್ಯಾಯಾಲಯ, ಅರಕಲಗೂಡು

**ಸಿ.ಸಿ.ನಂಃ50/2018**

ಫಿರ್ಯಾದಿ :- ಆರಕ್ಷಕ ಉಪ-ನಿರೀಕ್ಷಕರು,
ಅರಕಲಗೂಡು ಪೊಲೀಸ್ ಠಾಣೆ,
ಅರಕಲಗೂಡು

ವಿರುದ್ಧ

ಆರೋಪಿ :- ತಿಮ್ಮಯ್ಯ @ ರಕ್ಷಿತಾ

**:: ಆಪಾದನೆ ::**

ಶ್ರೀ.ಯೋಗೇಶ್, ಎಂ.ಎ. ಎಲ್.ಎಲ್.ಬಿ., ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ, ಅರಕಲಗೂಡು ಆದ ನಾನು,

ತಿಮ್ಮಯ್ಯ @ ರಕ್ಷಿತಾ ಬಿನ್ ರಮೇಶಶೆಟ್ಟಿ,
24 ವರ್ಷ, ಬಿಟ್ಟಗೌಡನಹಳ್ಳಿ ಗ್ರಾಮ,
ದೊಡ್ಡಮಗ್ಗೆ ಹೋಬಳಿ, ಅರಕಲಗೂಡು ತಾಲ್ಲೂಕು

ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ದಿಃ22/09/2017 ರಂದು ಅರಕಲಗೂಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಬಿಟ್ಟಗೌಡನಹಳ್ಳಿ ಹತ್ತಿರ ಮೃತ ಕುಮಾರ @ ಪುಟ್ಟನನ್ನು ಆರೋಪಿಯಾದ ನೀವು ಕೆಎ-02-ಇಟಿ-8450 ರ ಬೈಕಿನಲ್ಲಿ ಕೂರಿಸಿಕೊಂಡು ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಸಾರ್ವಜನಿಕ ಸ್ಥಳದಲ್ಲಿ ನಿರ್ಲಕ್ಷತೆಯಿಂದ ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಬಿಟ್ಟಗೌಡನಹಳ್ಳಿ-ಸಂತೆಮರೂರು ರಸ್ತೆ ಪಟೇಲ್ ನಿಂಗರಾಜುರವರ ಜಮೀನಿನ ಹತ್ತಿರ ರಾತ್ರಿ ಸುಮಾರು 8-00 ಗಂಟೆ ಸಮಯದಲ್ಲಿ ರಸ್ತೆಯ ಬದಿಯ ಗುಂಡಿಗೆ ಬೀಳಿಸಿ ಅಪಘಾತ ಪಡಿಸಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದ್ದು, ನೀವು ಭಾ.ದಂ.ಸಂ.ಕಲಂಃ279 ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ದಿನ, ಸಮಯ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಅತಿವೇಗ ಮತ್ತು ಅಜಾಗರೂಕತೆಯಿಂದ ಬೈಕನ್ನು ಚಲಾಯಿಸಿಕೊಂಡು

ಬಂದು ಗುಂಡಿಗೆ ಬೀಳಿಸಿದ ಪರಿಣಾಮ ಮೃತ ಕುಮಾರ @ ಪುಟ್ಟ ಕೆಳಕ್ಕೆ ಬಿದ್ದಾಗ ತಲೆಗೆ ಪೆಟ್ಟಾಗಿ ಅರಕಲಗೂಡು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ನಂತರ ಹೆಚ್ಚಿನ ಚಿಕಿತ್ಸೆಗೆ ಹಾಸನ ಎನ್‌ಡಿಆರ್ ಕೆ ಆಸ್ಪತ್ರೆಗೆ ಕರೆದುಕೊಂಡು ಹೋಗಿ, ನಂತರ ಬೆಂಗಳೂರಿನ ನಿಮ್ಹಾನ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ನಂತರ ಹಾಸನ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಚಿಕಿತ್ಸೆ ಫಲಕಾರಿಯಾಗದೆ ದಿಃ06/10/2017 ರಂದು ರಾತ್ರಿ ಸುಮಾರು 8-45 ಗಂಟೆ ಸಮಯದಲ್ಲಿ ಮೃತಪಡಲು ಕಾರಣರಾಗಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದ್ದು, ನೀವು ಭಾ.ದಂ.ಸಂ.ಕಲಂಃ304(ಎ)ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನನ್ನ ಸಮಕ್ಷಮದಲ್ಲಿ ಪಡೆದುಕೊಳ್ಳಲಾಯಿತು.

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಅರಕಲಗೂಡು

1. ನಿಮಗೆ ಮೇಲೆ ವಿವರಿಸಲಾದ ಆಪಾದನೆಯ ವಿವರಗಳು ತಿಳಿಯಿತೇ?

ಉತ್ತರಃ-

2. ಮೇಲೆ ಓದಿ ಹೇಳಿದ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ ಅಥವಾ ವಿಚಾರಣೆಯಾಗಬಯಸುವಿರಾ?

ಉತ್ತರಃ-

ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಅರಕಲಗೂಡು.